ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಉನ್ನತ ಶಿಕ್ಷಣ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE : 12/6/2020

# ರಾಜ್ಯಕ್ಕೆ ಒಂದೇ ಮುಕ್ತ ವಿ.ವಿ

ಪ್ರಜಾವಾಣಿ ವಾರ್ತೆ 12-6-2020

ಬೆಂಗಳೂರು: ರಾಜ್ಯದಲ್ಲಿ ಇನ್ನು ಮುಂದೆ ಮೈಸೂರಿನ 'ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ' ಮಾತ್ರ ಕಾರ್ಯನಿರ್ವಹಿಸಲಿದ್ದು, ಉಳಿದ ವಿಶ್ವವಿದ್ಯಾಲಯಗಳು ನಡೆಸುತ್ತಿರುವ ದೂರಶಿಕ್ಷಣ ವಿಭಾಗಗಳ ಚಟುವಟಿಕೆಗಳನ್ನು ಸ್ಥಗಿತಗೊಳಿಸಲು ಸರ್ಕಾರ ನಿರ್ಧರಿಸಿದೆ.

ರಾಜ್ಯದಲ್ಲಿ ಹಲವು ವಿಶ್ವವಿದ್ಯಾಲಯಗಳು ದೂರ ಶಿಕ್ಷಣ ನೀಡುತ್ತಿವೆ. ಮುಂದೆ ಅವುಗಳಿಗೆ ಅವಕಾಶ ಇರುವುದಿಲ್ಲ. ಈ ಎಲ್ಲ ದೂರ ಶಿಕ್ಷಣ ವಿಭಾಗಗಳು ಕರ್ನಾಟಕ ಮುಕ್ತ ವಿಶ್ವವಿದ್ಯಾಲಯದಲ್ಲೇ ನೋಂದಾಯಿಸಿಕೊಳ್ಳಬೇಕೆಂದು ತೀರ್ಮಾನಿಸಲಾಗಿದೆ ಎಂದು ಗುರುವಾರ ಸಚಿವ ಸಂಪುಟ ಸಭೆಯ ಬಳಿಕ ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ ಅವರು ಮಾಹಿತಿ ನೀಡಿದರು.

## ಸಂಪುಟದ ಪ್ರಮುಖ ತೀರ್ಮಾನಗಳು

- ಮುಂಬಡ್ತಿ ಮತ್ತು ಶಿಕ್ಷೆಗೆ ಸಂಬಂಧಿಸಿದಂತೆ ಕೆಪಿಎಸ್‌ಸಿಯಿಂದ ಸಲಹೆ ಪಡೆಯಬೇಕು ಎಂಬುದಾಗಿ ಇದ್ದ ನಿಯಮ ರದ್ದು
- ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯದ ಹೆಸರನ್ನು ಬೆಂಗಳೂರು ನಗರ ವಿಶ್ವವಿದ್ಯಾಲಯವಾಗಿ ಬದಲಾವಣೆ
- ಬೆಂಗಳೂರು ವಿಜ್ಞಾನ ಕಾಲೇಜನ್ನು ವಿಶ್ವವಿದ್ಯಾಲಯವಾಗಿ ರೂಪಿಸಲಾಗುವುದು. ಇದಕ್ಕೆ ನೃಪತುಂಗ ವಿಶ್ವವಿದ್ಯಾಲಯ ಎಂದು ಹೆಸರಿಡಲು ನಿರ್ಧಾರ
- ಹಾಸನ, ಸಿಂಧಗಿಗೆ ಮಂಜೂರಾಗಿದ್ದ ತೋಟಗಾರಿಕೆ ಕಾಲೇಜುಗಳು ರದ್ದು
- ರೈತ ಹೋರಾಟ, ಗಣಪತಿ ವಿಸರ್ಜನೆ ಸಂದರ್ಭದಲ್ಲಿ ನಡೆದ ಗಲಾಟೆ ಸಂದರ್ಭದಲ್ಲಿ ದಾಖಲಾಗಿದ್ದ 53 ಪ್ರಕರಣಗಳನ್ನು ಕೈಬಿಡಲು ತೀರ್ಮಾನ
- ಉಡುಪಿ ಜಿಲ್ಲೆಯ ಬೈಂದೂರು ಪಟ್ಟಣ ಪಂಚಾಯ್ತಿಯಾಗಿ ಮೇಲ್ದರ್ಜೆಗೆ
- ಬೆಂಗಳೂರಿನಲ್ಲಿ ವಿಜ್ಞಾನ ಗ್ಯಾಲರಿ ಸ್ಥಾಪನೆಗೆ ನಿರ್ಧಾರ. ಇದ ಪರಿಷ್ಕೃತ ಅಂದಾಜು ವೆಚ್ಚ ₹86.75 ಕೋಟಿಗೆ ಒಪ್ಪಿಗೆ
- ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳಿಗೆ ಸಂಸ್ಕರಿಸಿದ ತ್ಯಾಜ್ಯ ನೀರು ಒಯ್ಯುವ ಕೆ.ಸಿ.ವ್ಯಾಲಿಗೆ ಚಿಕ್ಕಬೇಗೂರು ಕೆರೆಯಿಂದ 15 ಎಂಎಲ್‌ಡಿ(₹20.5 ಕೋಟಿ ವೆಚ್ಚ) ಮತ್ತು ಹುಳಿಮಾವು ಕೆರೆಯಿಂದ 10 ಎಂಎಲ್‌ಡಿ(₹19.5 ಕೋಟಿ ವೆಚ್ಚ) ಸಂಸ್ಕರಿಸಿದ ನೀರು ಹರಿಸಲು ಸಂಪುಟ ಒಪ್ಪಿಗೆ
- ಪೊಲೀಸ್ ಇಲಾಖೆಯ ಸಿಪಿಸಿ ಹುದ್ದೆಗಳ ಭರ್ತಿಯಲ್ಲಿ ಸಿಎಆರ್, ಡಿಎಆರ್, ಕೆಎಸ್‌ಆರ್‌ಪಿ ಕಾನ್‌ಸ್ಟೇಬಲ್‌ಗಳಿಗೆ ಶೇ 10 ರಷ್ಟು ಹುದ್ದೆಗಳು ಮೀಸಲು